ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/07/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1,
ದಿನಾಂಕ:26-05-2018

ಸುತ್ತೋಲೆ

ವಿಷಯ: 2018 ಮೇ/ಜೂನ್ ಡಿಪ್ಲೋಮ ಥಿಯರಿ ಪರೀಕ್ಷೆಯ ದಿ:28-05-2018ರ ಪರೀಕ್ಷೆಗಳನ್ನು ಮುಂದೂಡಿರುವ ಕುರಿತು

***********

ಮೇ 2018ರ ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ, ರಾಜರಾಜೇಶ್ವರಿ ವಿಧಾನ ಸಭಾ ಕ್ಷೇತ್ರದ ಚುನಾವಣೆಯು ದಿನಾಂಕ:28-05-2018 ರಂದು ಜರುಗಲಿದ್ದು, ಹಲವು ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳು ಸದರಿ ವಿಧಾನಸಭಾ ಕ್ಷೇತ್ರಕ್ಕೊಳಪಡುವ ಕಾರಣ ರಾಜ್ಯಾದ್ಯಂತದ ಪರೀಕ್ಷಾ ಕೇಂದ್ರಗಳಲ್ಲಿ ದಿನಾಂಕ:28-05-2018 ರಂದು ನಡೆಯಬೇಕಾಗಿರುವ 2018 ಮೇ/ಜೂನ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳನ್ನು ದಿನಾಂಕ:08-06-2018ಕ್ಕೆ ಮುಂದೂಡಲಾಗಿದೆ. ಪರೀಕ್ಷಾ ದಿನಾಂಕವನ್ನು ಮಾತ್ರ ಮುಂದೂಡಲಾಗಿದ್ದು, ಪರೀಕ್ಷಾ ವೇಳೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲವೆಂದು, ಇನ್ನುಳಿದಂತೆ ಬೇರೆ ಯಾವುದೇ ಬದಲಾವಣೆಗಳಿರುವುದಿಲ್ಲವೆಂದು ತಿಳಿಸಲಾಗಿದೆ. ಈ ವಿಷಯವನ್ನು ವಿದ್ಯಾರ್ಥಿಗಳು/ ಉಪನ್ಯಾಸಕರು/ ಪೋಷಕರ ಗಮನಕ್ಕೆ ತಪ್ಪದೇ ತರುವಂತೆ ಎಲ್ಲಾ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:

ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ ಉಪ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರು/ ಪ್ರಿನ್ಸಿಪಾಲರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ:1) ಖಜಾನೆ ನಿರ್ದೇಶಕರು, ಕರ್ನಾಟಕ ಸರ್ಕಾರ, ಬೆಂಗಳೂರು
2) ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ಬೆಂಗಳೂರು
3) ಪರೀಕ್ಷಾ ತನಿಖಾ ದಳಗಳ ಮುಖಂಡರುಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
4) ಸಂಬಂಧಪಟ್ಟ ಉಪ/ಜಿಲ್ಲಾ ಖಜಾನಾಧಿಕಾರಿಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
5) ಸಂಬಂಧಪಟ್ಟ ಆರಕ್ಷಕ ಠಾಣಾಧಿಕಾರಿಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
6) ನಿರ್ದೇಶಕರ ಆಪ್ತ ಶಾಖೆ
7) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ.
8) ಇ-ಗವರ್ನೆನ್ಸ್ ವಿಭಾಗ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
9) ಗಣಕ ಕೇಂದ್ರ – ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
10) ಕಾರ್ಯದರ್ಶಿಯವರ ಆಪ್ತ ಶಾಖೆ